ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಲೆಕ್ಕ ಅಧೀಕ್ಷಕರ ವೇತನ ಶ್ರೇಣಿಯಲ್ಲಿ ತಾರತಮ್ಯದ ಬಗ್ಗೆ

ಶ್ರೀ ನಸೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು):-

802 (986) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2019-20 ರಿಂದ ಇಲ್ಲಿಯವರೆಗೆ ಕಲಬುರಗಿ ವಿಭಾಗದ ಶಿಕ್ಷಣ ಆಯುಕ್ತಾಲಯದಲ್ಲಿ ಲೆಕ್ಕ ಅಧೀಕ್ಷಕರ ಹುದ್ದೆಗೆ ಬಡ್ತಿಯನ್ನು ನೀಡಲಾಗಿದೆಯೇ ; ನೀಡಲಾಗಿದ್ದಲ್ಲಿ, ಸದರಿ ಲೆಕ್ಕ ಅಧೀಕ್ಷಕರಿಗೆ ಯಾವ ವೇತನ ಶ್ರೇಣಿಯನ್ನು ನೀಡಲಾಗಿದೆ ;

(ಆ) ಬೆಂಗಳೂರು ಹಾಗೂ ಇತರೆ ಆಯುಕ್ತಾಲಯದಿಂದ ಲೆಕ್ಕ ಅಧೀಕ್ಷಕರ ಹುದ್ದೆಗೆ ಬಡ್ತಿಯನ್ನು ನೀಡಿದಾಗ ಯಾವ ವೇತನ ಶ್ರೇಣಿಯನ್ನು ನೀಡಲಾಗಿದೆ ;

(ಇ) ಬೆಂಗಳೂರು ಹಾಗೂ ಕಲಬುರಗಿ ಆಯುಕ್ತಾಲಯದವರು ನೀಡುತ್ತಿರುವ ಲೆಕ್ಕ ಅಧೀಕ್ಷಕರ ವೇತನ ಶ್ರೇಣಿಯು ಸಾಮಾನ್ಯವಾಗಿದೆಯೇ ; ಇಲ್ಲದಿದ್ದಲ್ಲಿ, ತಾರತಮ್ಯಕ್ಕೆ ಕಾರಣಗಳೇನು;

(ಈ) ಕಲಬುರಗಿ ಆಯುಕ್ತಾಲಯದಲ್ಲಿ ಆಗಿರುವ ಲೆಕ್ಕ ಅಧೀಕ್ಷಕರ ವೇತನ ತಾರತಮ್ಯವನ್ನು ಸರಿಪಡಿಸಲು ಎಷ್ಟು ದಿನಗಳ ಕಾಲಾವಕಾಶ ಬೇಕಾಗಿದೆ ?